# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **354** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೆ. ಪ್ರತಾಪಸಿಂಹ ನಾಯಕ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅನ್ನಭಾಗ್ಯ ಯೋಜನೆಯ ಹೆಚ್ಚುವರಿ ಅಕ್ಕಿ ಬದಲು ನೀಡುತ್ತಿದ್ದ ಅದರ ಬಾಬ್ತಿನ ಹಣ ಕಳೆದ ಐದು ತಿಂಗಳಿನಿಂದ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿನ ಫಲಾನುಭವಿಗಳ ಖಾತೆಗೆ ಇನ್ನೂ ಜಮೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜುಲೈ 2023 ರ ಮಾಹೆಯಿಂದ ಅಕ್ಟೋಬರ್ 2024 ರ ಮಾಹೆಯವರೆವಿಗೂ ಅರ್ಹ ಫಲಾನುಭವಿಗಳ ಖಾತೆಗೆ DBT ಯೋಜನೆಯಡಿ ಹಣ ವರ್ಗಾವಣೆ ಮಾಡಲಾಗಿರುತ್ತದೆ. ನವೆಂಬರ್ ಮತ್ತು ಡಿಸೆಂಬರ್ 2024 ಮಾಹೆಯ DBT ಹಣ ವರ್ಗಾವಣೆ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಆ | ಬಂದಿದ್ದಲ್ಲಿ, ಎಷ್ಟು ತಿಂಗಳ ಹಣ ಫಲಾನುಭವಿಗಳ ಖಾತೆಗೆ ಜಮೆ ಮಾಡಲು ಇನ್ನೂ ಬಾಕಿ ಉಳಿದಿದೆ; ಅದರ ಒಟ್ಟು ಮೊತ್ತವೆಷ್ಟು; | ಜುಲೈ 2023 ರ ಮಾಹೆಯಿಂದ ಅಕ್ಟೋಬರ್ 2024 ರ ಮಾಹೆಯವರೆವಿಗೂ ಅರ್ಹ ಫಲಾನುಭವಿಗಳ ಖಾತೆಗೆ DBT ಯೋಜನೆಯಡಿ ಹಣ ವರ್ಗಾವಣೆ ಮಾಡಲಾಗಿರುತ್ತದೆ. ನವೆಂಬರ್ ಮತ್ತು ಡಿಸೆಂಬರ್ 2024ರ ಮಾಹೆಯ DBT ಹಣ ವರ್ಗಾವಣೆ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಇ | ಫಲಾನುಭವಿಗಳ ಖಾತೆಗೆ ಹಣ ಜಮೆ ಮಾಡಲು ಈ ರೀತಿ ಪದೇ ಪದೇ ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಸೂಕ್ತ ಕ್ರಮವಹಿಸದೇ ಇರಲು ಕಾರಣಗಳೇನು; | ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಪ್ರಸ್ತುತ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ (AAY) ಮತ್ತು ಆದ್ಯತಾ ಪಡಿತರ ಚೀಟಿಗಳ (PHH) ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (DBT) ಮುಖಾಂತರ ಹಣವನ್ನು ವರ್ಗಾಯಿಸುವ ಪ್ರಕ್ರಿಯೆಯ ಬದಲಾಗಿ ಫೆಬ್ರವರಿ-2025ರ ಮಾಹೆಯಿಂದ ಜಾರಿಗೆ ಬರುವಂತೆ ಅರ್ಹ ಫಲಾನುಭವಿಗಳಿಗೆ 05 ಕೆ.ಜಿ ಅಕ್ಕಿಯನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲು ಆದೇಶಿಸಲಾಗಿರುತ್ತದೆ. |

| | | |
|---|---|---|
| | | ಅದರಂತೆ ಫೆಬ್ರುವರಿ-2025ರ ಮಾಹೆಯಿಂದ ಡಿ.ಬಿ.ಟಿ ಬದಲಾಗಿ ಪ್ರತಿ ಫಲಾನುಭವಿಗೆ 5 ಕೆ.ಜಿ ಹೆಚ್ಚುವರಿ ಅಕ್ಕಿ ನೀಡಲಾಗುತ್ತಿದೆ. ಫೆಬ್ರುವರಿ-2025 ಮತ್ತು ಮಾರ್ಚ್-2025 ಮಾಹೆಗಳಿಗೆ ಈಗಾಗಲೇ ಅಕ್ಕಿಯನ್ನು ಖರೀದಿಸಿ ವಿತರಣೆಗೆ ಕ್ರಮವಹಿಸಲಾಗಿದೆ. |
| ಈ | ಯಾವ ಕಾಲಮಿತಿಯೊಳಗೆ ಬಾಕಿ ಇರುವ ಪೂರ್ಣ ಮೊತ್ತವನ್ನು ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು? | ಬಾಕಿ ಇರುವ ಮೊತ್ತವನ್ನು ಅರ್ಹ ಫಲಾನುಭವಿಗಳ ಖಾತೆಗೆ ಜಮೆ ಮಾಡಲು ಕ್ರಮವಹಿಸಲಾಗುವುದು. |

ಇ- ಆನಾಸ 09 ಎಫ್‌ಪಿಪಿ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು